ಕರ್ನಾಟಕ ಸರ್ಕಾರ
**ನಿರ್ದೇಶಕರ ಕಚೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು.**
*E-mail:Commissioner.pue@gmail.com. Ph. No.23361857, 23361858* Fax-23361852*

ಸಂಖ್ಯೆ: ಪಪೂಶಿಇ/ಆಡಳಿತ-1/GPL/ಸಿಆರ್-01/ಪ್ರಾ.ವರ್ಗ/01/2022-23 ದಿನಾಂಕ: 01-10-2022

## ಜ್ಞಾಪನ

**ವಿಷಯ:-** 2022-23ನೇ ಸಾಲಿನಲ್ಲಿ ನಡೆಯುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರುಗಳ ವರ್ಗಾವಣೆ ಕೌನ್ಸೆಲಿಂಗ್‌ಗಾಗಿ ತಾತ್ಕಾಲಿಕ ಖಾಲಿ ಹುದ್ದೆ ಪಟ್ಟಿಯನ್ನು ಪ್ರಕಟಿಸುವ ಬಗ್ಗೆ.

**ಉಲ್ಲೇಖ:-** ಈ ಕಚೇರಿ ಸಂಖ್ಯೆ ಜ್ಞಾಪನ ಸಂಖ್ಯೆ: ಪಪೂಶಿಇ/ಆವಿಎ/ಉ.ವರ್ಗ/01/2022-23 ದಿನಾಂಕ:18-05-2022.

* * *

ಸರ್ಕಾರಿ ಪದವಿ ಪೂರ್ವ ಕಾಲೇಜು ಪ್ರಾಂಶುಪಾಲರುಗಳ 2022-23ನೇ ಸಾಲಿನ ವರ್ಗಾವಣೆ ಕೌನ್ಸೆಲಿಂಗ್‌ಗಾಗಿ ಅನ್-ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಉಲ್ಲೇಖಿತ ಜ್ಞಾಪನದಂತೆ ಅವಕಾಶ ಕಲ್ಪಿಸಲಾಗಿದೆ. ರಾಜ್ಯದ ಎಲ್ಲಾ ಜಿಲ್ಲೆಗಳ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿನ ಪ್ರಾಂಶುಪಾಲರುಗಳ ಖಾಲಿ ಹುದ್ದೆಗಳ ಜಿಲ್ಲಾವಾರು ಮಾಹಿತಿಯನ್ನು ಇದರೊಂದಿಗೆ ಲಗತ್ತಿಸಿ ಮಿಂಚಂಚೆ ಮೂಲಕ ಜಿಲ್ಲಾ ಉಪನಿರ್ದೇಶಕರ ಕಚೇರಿಗೆ ಕಳುಹಿಸಲಾಗಿದೆ ಹಾಗೂ ಇಲಾಖಾ ಅಂತರ್ಜಾಲದಲ್ಲಿ ಪ್ರಕಟಿಸಲಾಗಿದೆ.

ಸದರಿ ಖಾಲಿ ಹುದ್ದೆ ಮಾಹಿತಿಯನ್ನು ಪರಿಶೀಲಿಸಿ, ಸಂಬಂಧಿಸಿದ ಜಿಲ್ಲೆಯ ಉಪ ನಿರ್ದೇಶಕ ಕಚೇರಿ ಸಿಬ್ಬಂದಿಯವರು ಪಟ್ಟಿಯಲ್ಲಿರುವ ಮಾಹಿತಿಗೆ Additions or Deletions ಮಾಡಿ ಪೂರಕ ದಾಖಲೆಗಳೊಂದಿಗೆ ಮಾಹಿತಿಯನ್ನು ಕ್ರೋಢೀಕರಿಸಿ ದಿನಾಂಕ: 07-10-2022ರ ಒಳಗಾಗಿ **ಉಪನಿರ್ದೇಶಕರು (ಆಡಳಿತ-1), ಪದವಿ ಪೂರ್ವ ಶಿಕ್ಷಣ ನಿರ್ದೇಶನಾಲಯ, ಮಲ್ಲೇಶ್ವರಂ, ಬೆಂಗಳೂರು,** ಇವರಿಗೆ ಹಾಗೂ ಸ್ಕ್ಯಾನ್ ಪ್ರತಿಯನ್ನು ತಪ್ಪದೆ dpuetransfer22@gmail.com ಇ-ಮೇಲ್‌ಗೆ ಕಳುಹಿಸಿಕೊಡಲು ಈ ಮೂಲಕ ತಿಳಿಸಿದೆ. **ಪ್ರಾಚಾರ್ಯರು ಖಾಲಿ ಹುದ್ದೆ ಮಾಹಿತಿಯನ್ನು ನೇರವಾಗಿ ನಿರ್ದೇಶನಾಲಯಕ್ಕೆ ಸಲ್ಲಿಸದೇ ಜಿಲ್ಲಾ ಉಪನಿರ್ದೇಶಕರ ಮುಖೇನ ಸಲ್ಲಿಸಲು ಸಹ ತಿಳಿಸಿದೆ.**

ಜಂಟಿ ನಿರ್ದೇಶಕರು(ಆಡಳಿತ),
ಪದವಿ ಪೂರ್ವ ಶಿಕ್ಷಣ ಇಲಾಖೆ

**ರವರಿಗೆ:**

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು ಪದವಿ ಪೂರ್ವ ಶಿಕ್ಷಣ ಇಲಾಖೆ, ಇವರುಗಳಿಗೆ – ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ.

2. ಸರ್ಕಾರಿ ಪದವಿ ಪೂರ್ವ ಕಾಲೇಜುಗಳು ಎಲ್ಲಾ ಪ್ರಾಂಶುಪಾಲರುಗಳಿಗೆ – ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.
3. ಸಹಾಯಕ ನಿರ್ದೇಶಕರು – ಇ-ಆಡಳಿತ, ನಿರ್ದೇಶಕರ ಕಚೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ – ಅಂತರ್ಜಾಲದಲ್ಲಿ ಮಾಹಿತಿಗಳನ್ನು ಅಳವಡಿಸುವ ಬಗ್ಗೆ ಮತ್ತು ಅಗತ್ಯ ಕ್ರಮಕ್ಕೆ.
4. ಸಹಾಯಕ ನಿರ್ದೇಶಕರು – ಗಣಕ ಶಾಖೆ, ನಿರ್ದೇಶಕರ ಕಚೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ – ಕೌನ್ಸಲಿಂಗ್ ಸಿದ್ಧತೆ ಮತ್ತು ಸಹಕ್ಕಾರಕ್ಕಾಗಿ.
5. ಕಚೇರಿ / ಹೆಚ್ಚುವರಿ ಪ್ರತಿ